# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: : 531
ಮಾನ್ಯ ಸದಸ್ಯರ ಹೆಸರು : ಶ್ರೀ ಡಾ: ಎಂ. ಜಿ.ಮುರಳಿ (ವಿಧಾನ ಸಭಾ ಕ್ಷೇತ್ರ)
ಉತ್ತರಿಸುವ ದಿನಾಂಕ: : 30.01.2026
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು

******

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೀದರ್ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಡೆಯುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಸತಿ ನಿಲಯಗಳ ಸಂಖ್ಯೆ ಎಷ್ಟು; | ಬೀದರ್ ಜಿಲ್ಲೆಯಲ್ಲಿ ಇಲಾಖಾವತಿಯಿಂದ ಒಟ್ಟು 42 ಡಾ.ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು ಹಾಗೂ 19 ಡಾ.ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಒಟ್ಟಾರೆ, 61 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿವೆ. |
| ಆ | ಕಳೆದ ಮೂರು ವರ್ಷಗಳಲ್ಲಿ ಈ ವಸತಿ ನಿಲಯಗಳ ನಿರ್ವಹಣೆಗಾಗಿ ಬಿಡುಗಡೆಯಾದ ಮತ್ತು ಬಳಕೆಯಾದ ಅನುದಾನ ಎಷ್ಟು; | (ಕೆಳಗಿನ ಕೋಷ್ಟಕ ನೋಡಿ) |
| ಇ | ಸ್ವಂತ ಕಟ್ಟಡವಿಲ್ಲದ ವಸತಿ ನಿಲಯಗಳೆಷ್ಟು; ಹೊಸ ಕಟ್ಟಡ ನಿರ್ಮಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಬೀದರ್ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಡೆಸುತ್ತಿರುವ 61 ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ವಿದ್ಯಾರ್ಥಿ ನಿಲಯಗಳ ಪೈಕಿ, 57 ವಿದ್ಯಾರ್ಥಿ ನಿಲಯಗಳು ಸ್ವಂತ ಕಟ್ಟಡಗಳಲ್ಲಿ ಮತ್ತು 04 ವಿದ್ಯಾರ್ಥಿ ನಿಲಯಗಳು ಬಾಡಿಗೆ ಕಟ್ಟಡಗಳಲ್ಲಿ ನಡೆಸಲಾಗುತ್ತಿದೆ. ಬಾಡಿಗೆ ಕಟ್ಟಡಗಳಲ್ಲಿ ನಡೆಸುತ್ತಿರುವ 04 ವಿದ್ಯಾರ್ಥಿ ನಿಲಯಗಳ ಪೈಕಿ 02 ವಿದ್ಯಾರ್ಥಿ ನಿಲಯಗಳಿಗೆ ಈಗಾಗಲೇ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲಾಗಿದ್ದು, ಕಾಮಗಾರಿಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿರುತ್ತವೆ. ಬಾಕಿ 02 ವಿದ್ಯಾರ್ಥಿ ನಿಲಯಗಳಿಗೆ ನಿವೇಶನಗಳು ಲಭ್ಯವಿದ್ದು, ಅನುದಾನದ ಲಭ್ಯತೆಯನ್ನು ಆಧರಿಸಿ, ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮವಹಿಸಲಾಗುತ್ತಿದೆ. |

**2022-23 ನೇ ಸಾಲಿನಿಂದ 2024-25ನೇ ಸಾಲಿನ ವರೆಗೂ ಬೀದರ್ ಜಿಲ್ಲೆಗೆ ಬಿಡುಗಡೆಯಾದ ಹಾಗೂ ಖರ್ಚಾದ ಅನುದಾನದ ವಿವರ.**

ರೂ.ಲಕ್ಷಗಳಲ್ಲಿ

| ವಸತಿ ನಿಲಯಗಳು | 2022-23 | | 2023-24 | | 2024-25 | |
|---|---|---|---|---|---|---|
| | ಬಿಡುಗಡೆ | ಖರ್ಚು | ಬಿಡುಗಡೆ | ಖರ್ಚು | ಬಿಡುಗಡೆ | ಖರ್ಚು |
| ಮೆ.ಪೂ | 419.00 | 415.21 | 732.15 | 732.03 | 228.82 | 220.97 |
| ಮೆ.ನಂ | 178.37 | 177.78 | 211.36 | 211.35 | 220.36 | 217.65 |

**ಸಕಇ 116 ಪಕವಿ 2026**

(ಡಾ: ಹೆಚ್.ಸಿ.ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು